**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1596/2013**

| | | |
|---|---|---|
| ಸಾಕ್ಷಿದಾರರ ಹೆಸರು | **ಗೋಪಾಲ** | **ಫ್ರಾಸಾಃ 04** |
| ತಂದೆಯ/ಗಂಡನ ಹೆಸರು | ದಾಸಯ್ಯ | **ಚಾಸಾಃ 04** |
| ವಯಸ್ಸು | 53 ವರ್ಷ | |
| ಕೆಲಸ | ಕೂಲಿ | |
| ವಾಸ | ಗುಂಡ್ಲುಪೇಟೆ | |

ದಿಃ 08.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಫ್ರಾಷ್ಟ ಸ.ಸ.ಅ ರವರಿಂದಃ**

ಆರೋಪಿಯ ಪರಿಚಯ ಇಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರಿಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಹಾಗೂ ಯಾವುದೇ ವಸ್ತುವನ್ನು ಅಮಾನತು ಪಡಿಸಿಕೊಂಡಿರುವುದಿಲ್ಲ.

ಸಾಕ್ಷಿ ಅಮಾನತ್ ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ. 4 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 4(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿ.ಪಿ. 5 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಫ್ರಾಷ್ಟ ಸ.ಸ.ಅ ರವರಿಂದಃ**

ದಿಃ 10.10.2013 ರಂದು ಪೊಲೀಸರು ನಮ್ಮನ್ನು ಪೊಲೀಸ್ ಠಾಣೆಗೆ ಬರಮಾಡಿಕೊಂಡು ಈ ಪ್ರಕರಣದ ವಿಚಾರ ತಿಳಿಸಿ ಚಾಸಾ 6 ರವರು ಹಾಜರುಪಡಿಸಿದಂತಹ ಮದುವೆಯ ಲಗ್ನಪತ್ರಿಕೆಯನ್ನು ನನ್ನ ಸಮಕ್ಷಮ ಅಮಾನತ್ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮಹಜರ್ ಅನ್ನು 16.45 ರಿಂದ 17.30 ರವರೆಗೆ ತಯಾರಿಸಲಾಯಿತು

ಎಂದರೆ ಸರಿಯಲ್ಲ. ಅದಕ್ಕೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈಗ ಓದಿ ಕೇಳಿಸಿಕೊಂಡ ನಿ.ಪಿ. 5 ರಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ.ಹೇ.ಕೇ.ಸ.ಇದೆ.ಎಂ.ಒ**

1 **ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ನ್ಯಾಯಾಲಯ, ನಂಜನಗೂಡು**